ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1244
ಸದಸ್ಯರ ಹೆಸರು	:	ಶ್ರೀ ಮೋಹನ್‌ಕುಮಾರ್ ಕೊಂಡಜ್ಜಿ
ಉತ್ತರಿಸುವ ದಿನಾಂಕ	:	23/12/2021
ಉತ್ತರಿಸುವ ಸಚಿವರು	:	ಮಾನ್ಯ ಜಲಸಂಪನ್ಮೂಲ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರಗಳು
ಅ)	ಜಲ ಸಂಪನ್ಮೂಲ ಇಲಾಖೆಯಲ್ಲಿ ಹಾಗೂ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ನಿಗಮಗಳಲ್ಲಿ ದ್ವಿತೀಯ ದರ್ಜೆ ಸಹಾಯಕರ ಖಾಲಿ ಇರುವ ಹುದ್ದೆಗಳೆಷ್ಟು; (ವಿವರ ನೀಡುವುದು)	ಜಲ ಸಂಪನ್ಮೂಲ ಇಲಾಖೆ ಹಾಗೂ ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿರುವ ಎಲ್ಲಾ ನಿಗಮಗಳಲ್ಲಿ ಖಾಲಿ ಇರುವ ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳ ವಿವರ ಕೆಳಕಂಡತಿರುತ್ತದೆ. 1) ಜಲಸಂಪನ್ಮೂಲ ಇಲಾಖೆ: 72 2) ಕಾವೇರಿ ನೀರಾವರಿ ನಿಗಮ ನಿ. 126 3) ಕರ್ನಾಟಕ ನೀರಾವರಿ ನಿಗಮ ನಿ. 117 4) ಕೃಷ್ಣಾ ಭಾಗ್ಯ ಜಲ ನಿಗಮ ನಿ. 30 5) ವಿಶ್ವೇಶ್ವರಯ್ಯ ಜಲ ನಿಗಮ ನಿ. 80 **ಒಟ್ಟು ಹುದ್ದೆಗಳ ಸಂಖ್ಯೆ: 425**
ಆ)	ಅನುಕಂಪದ ಆಧಾರದ ಮೇಲೆ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ತುಂಬಲು ವಿಭಾಗೀಯ ಆಯುಕ್ತರು, ಬೆಂಗಳೂರು ಇವರಿಗೆ ಬೇಡಿಕೆ (Demand) ಸಲ್ಲಿಸಲಾಗಿದೆಯೇ; ಸಲ್ಲಿಸಲಾಗದಿದ್ದಲ್ಲಿ, ಸಲ್ಲಿಸದಿರಲು ಕಾರಣವೇನು;(ವಿವರ ನೀಡುವುದು)	ಕರ್ನಾಟಕ ನಾಗರೀಕ ಸೇವಾ (ಅನುಕಂಪದ ಆಧಾರದ ನೇಮಕಾತಿ) ನಿಯಮಗಳು 1966ರ ನಿಯಮ 4ರ ಉಪನಿಯಮ (5) ರನ್ವಯ ಅನುಕಂಪದ ಆಧಾರದ ಮೇಲೆ ನೇಮಕಾತಿಯನ್ನು ನೇರ ನೇಮಕಾತಿ ಕೋಟಾದಡಿ ಲಭ್ಯವಿರುವ ಹುದ್ದೆಗಳಿಗೆ ಎದುರಾಗಿ ಮಾಡಬೇಕಾಗಿರುತ್ತದೆ. ಅದೇ ನಿಯಮದ ಉಪನಿಯಮ 6 ರನ್ವಯ ದಿವಂಗತ ನೌಕರರು ಸೇವೆ ಸಲ್ಲಿಸುತ್ತಿದ್ದ ಇಲಾಖೆಯಲ್ಲಿಯೇ ಅವರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಬೇಕಾಗಿರುತ್ತದೆ. ಒಂದು ವೇಳೆ ಸಂಬಂಧಪಟ್ಟ ಇಲಾಖೆಯಲ್ಲಿ ಖಾಲಿ ಹುದ್ದೆಗಳು ಲಭ್ಯವಿಲ್ಲದಿದ್ದಲ್ಲಿ, ಅನುಕಂಪದ ಆಧಾರದ ಮೇಲೆ ನೇಮಕಾತಿಗೆ ಬಾಕಿಯಿರುವ ಅರ್ಜಿಗಳನ್ನು ಪೂರಕ ದಾಖಲೆಗಳೊಂದಿಗೆ ಆಯಾ ಅಭ್ಯರ್ಥಿಯ ಪ್ರದೇಶದ ವ್ಯಾಪ್ತಿಗೆ ಬರುವ ಪ್ರಾದೇಶಿಕ ಆಯುಕ್ತರಿಗೆ ಕಳುಹಿಸಬೇಕಾಗಿರುತ್ತದೆ.

		ಹೀಗೆ ಸಂಬಂಧಿಸಿದ ಇಲಾಖಾ ಮುಖ್ಯಸ್ಥರಿಂದ ಸ್ವೀಕರಿಸಿದ ಪ್ರಸ್ತಾವನೆಗಳನ್ನು ಪ್ರಾದೇಶಿಕ ಆಯುಕ್ತರು ಪರಿಶೀಲಿಸಿ ಇವರ ವ್ಯಾಪ್ತಿಯಲ್ಲಿ ಬರುವ ವಿವಿಧ ಇಲಾಖೆಯಲ್ಲಿರುವ ಖಾಲಿ ಹುದ್ದೆಗಳಿಗೆ ಎದುರಾಗಿ ಅಭ್ಯರ್ಥಿಗಳನ್ನು ಹಂಚಿಕೆ ಮಾಡುವ ಅಧಿಕಾರವನ್ನು ಸರ್ಕಾರದ ಅ.ಜ್ಞಾ. ಸಂಖ್ಯೆ: ಸಿಆಸುಇ 36 ಸೇಆಸೇ 96, ದಿನಾಂಕ: 07.02.1997 ಹಾಗೂ ಸಂಖ್ಯೆ: ಸಿಆಸುಇ 48 ಸೇಅನೇ 2006, ದಿನಾಂಕ: 24.11.2006 ರಲ್ಲಿ ನೀಡಲಾಗಿದೆ. ಆದುದರಿಂದ ಇಲಾಖೆಯಲ್ಲಿ ಖಾಲಿ ಹುದ್ದೆಗಳು ಲಭ್ಯವಿದ್ದಲ್ಲಿ ಇಲಾಖಾ ಮುಖ್ಯಸ್ಥರೇ ನೇಮಕಾತಿ ಮಾಡಿಕೊಳ್ಳಲು ಅಧಿಕಾರವಿರುವುದರಿಂದ ಪ್ರಾದೇಶಿಕ ಆಯುಕ್ತರಿಗೆ ಪ್ರಸ್ತಾವನೆಗಳನ್ನು ಕಳುಹಿಸುವ ಅಗತ್ಯವಿರುವುದಿಲ್ಲ.
ಇ)	ಸಲ್ಲಿಸದಿದ್ದಲ್ಲಿ ಯಾವ ಕಾಲಮಿತಿಯೊಳಗೆ ಸಲ್ಲಿಸಲಾಗುವುದು?(ವಿವರ ನೀಡುವುದು)	ಉದ್ಭವಿಸುವುದಿಲ್ಲ

ಸಂಖ್ಯೆ: ಜಸಂಇ 260 ಸೇಇಸಿ 2021

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು